918 ಶ್ರೀ ಮಂಜುನಾಥ್ ಹೆಚ್.ಪಿ. : ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಇಲಾಖೆಯಿಂದ ಮಂಜೂರಾಗಿರುವ ಅನುದಾನವೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಮಂಜೂರಾಗಿರುವ ಅನುದಾನದಲ್ಲಿ ಮೈಸೂರು ಜಿಲ್ಲೆ ಹಾಗೂ ಚಾಮರಾಜನಗರ ಜಿಲ್ಲೆಯ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)?

ಶ್ರೀ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು :

ಅ) ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದಂತೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ರೂ.232.37ಕೋಟಿಗಳನ್ನು 2008–09ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ. ಈ ಮೊತ್ತವನ್ನು ರೈಲ್ವೆ ಇಲಾಖೆ ವಿವಿಧ ಜಿಲ್ಲೆಗಳಲ್ಲಿ ಖರ್ಚು ಮಾಡಿದೆ. ರೈಲ್ವೆ ಯೋಜನೆಗಳಿಗೆ ಸರ್ಕಾರದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು 2002ರಿಂದ 31–3–09ರವರೆಗೆ ರೈಲ್ವೆ ಇಲಾಖೆಗೆ ರೂ.452.26 ಕೋಟಿಗಳನ್ನು ಬಿಡುಗಡೆ ಮಾಡಿದೆ. 2009–10ನೇ ಸಾಲಿಗೆ ರೂ.242.00 ಕೋಟಿಗಳನ್ನು ಒದಗಿಸಲಾಗಿದೆ. ವಿಮಾನ ನಿಲ್ದಾಣ ಯೋಜನೆಗಾಗಿ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ರೂ.126.55 ಕೋಟಿಗಳನ್ನು ಬಿಡುಗಡೆ ಮಾಡಿದೆ. 2009–10ನೇ ಸಾಲಿಗೆ ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿಗಾಗಿ ರೂ.100.00ಕೋಟಿಗಳನ್ನು ಒದಗಿಸಲಾಗಿದೆ.

ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿನ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಸರ್ಕಾರದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು AAIನ ಮೈಸೂರಿನ ಮಂಡಹಳ್ಳಿ ವಿಮಾನ ನಿಲ್ದಾಣ ಅಭಿವೃದ್ಧಿ ಯೋಜನೆಗೆ ಭೂಸ್ವಾಧೀನ/ವಿದ್ಯುತ್/ಕುಡಿಯುವ ನೀರು ಹಾಗೂ ವರುಣಾನಾಲಾ ಸ್ಥಳಾಂತರ ಮಾಡಲು ಹಣವನ್ನು ಬಿಡುಗಡೆ ಮಾಡಿದೆ. ಈ ಜಿಲ್ಲೆಗಳಲ್ಲಿನ ಇತರೆ ತಾಲ್ಲೂಕುಗಳಲ್ಲಿ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯ ಯಾವುದೇ ನಿರ್ದಿಷ್ಟ ಇತರೆ ಯೋಜನೆಗಳಿರುವುದಿಲ್ಲ.

ವಿಮಾನ ನಿಲ್ದಾಣಗಳ ಅಭಿವೃದ್ಧಿಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಬಿಡುಗಡೆ ಮಾಡಿದ ಮೊತ್ತದ ವಿವರಗಳು

(ರೂ.ಕೋಟಿಗಳಲ್ಲಿ)

ಕ್ರ ಸಂ	ಜಿಲ್ಲೆ (ವಿಮಾನ ನಿಲ್ದಾಣ)	ಬಿಡುಗಡೆ ಮಾಡಿದ ಮೊತ್ತ
1	ಮೈಸೂರು	9.11
2	ಹುಬ್ಬಳ್ಳಿ	42.20
3	ಹಾಸನ	3.00
4	ಬಿಜಾಪುರ	19.00
5	ಗುಲ್ಬರ್ಗಾ	10.01
6	ಶಿವಮೊಗ್ಗ	25.96
7	ಬೀದರ್	3.60
8	ರಾಯಚೂರು	–
9	ಬಳ್ಳಾರಿ	0.342
10	ಬೆಳಗಾಂ	13.333
	ಒಟ್ಟು	**126.555**

1067 ಶ್ರೀ ಶಂಕರ ಪಾಟೀಲ ಮುನೇನಕೊಪ್ಪ (ನವಲಗುಂದ) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ನವಲಗುಂದ ಪಟ್ಟಣದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮಂಡಳಿ ವತಿಯಿಂದ 2004 ರಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಪ್ರಾರಂಭಿಸಿದ್ದು ಈ ಕಾಮಗಾರಿ ಈಗ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಯೋಜನೆ ಯಾವಾಗ ಪೂರ್ಣಗೊಳಿಸ ಲಾಗುವುದು;

ಇ) ಈ ಯೋಜನೆಯ ವಿಳಂಬಕ್ಕೆ ಕಾರಣವೇನು; ಇದನ್ನು ನಿಗದಿತ ಅವಧಿಯಲ್ಲಿ ಮುಗಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು;